## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತಪಡಿ ಗದಗ್ ಜಿಲ್ಲೆಯ ಗದಗ, ನರಗುಂದ, ರೋಣ, ಶಿರಹಟ್ಟಿ ಮತ್ತು ಮುಂಡರಗಿ ತಾಲ್ಲೂಕುಗಳ ಗ್ರಾಮಗಳ ಆಯ್ಕೆ ಅನುಮೋದನೆ ಕುರಿತು.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:29.06.2012
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012 ದಿ:04.07.2012
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗರವರ ಪತ್ರ ಸಂಖ್ಯೆ:ಜಿಪಂಗ:ಅಭಿವೃದ್ಧಿ:ಸುಗ್ರಾಮ:12-13 ದಿನಾಂಕ:01.08.2012.

ಪ್ರಸ್ತಾವನೆ:

2012-13ನೇ ಸಾಲಿನ ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. 5ನೇ ಹಂತದ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ, ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿವರವಾಗಿ ಮೇಲೆ ಓದಲಾದ (1) ಮತ್ತು (2)ರ ಸರ್ಕಾರದ ಆದೇಶ ಹಾಗೂ ಸುತ್ತೋಲೆಯನ್ನು ಹೊರಡಿಸಲಾಗಿದೆ. ಅದರನ್ವಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗರವರು ನಿಯಮಾನುಸಾರ ಶಾಸಕರ ಶಿಫಾರಸಿನೊಂದಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಂದ ಅನುಮೋದಿಸಲ್ಪಟ್ಟ ಗದಗ ತಾಲ್ಲೂಕಿನ 7 ಗ್ರಾಮಗಳು, ನರಗುಂದ ತಾಲ್ಲೂಕಿನ 5 ಗ್ರಾಮಗಳು, ರೋಣ ತಾಲ್ಲೂಕಿನ 6 ಗ್ರಾಮಗಳು, ಶಿರಹಟ್ಟಿ ತಾಲ್ಲೂಕಿನ 4 ಗ್ರಾಮಗಳು ಮತ್ತು ಮುಂಡರಗಿ ತಾಲ್ಲೂಕಿನ 5 ಗ್ರಾಮಗಳು ಒಟ್ಟು 27 ಗ್ರಾಮಗಳ ಪಟ್ಟಿಯನ್ನು ಅನುಮೋದನೆ ನೀಡಲು ಉಲ್ಲೇಖಿತ 3ರ ಪತ್ರದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ನಿಯಮಗಳನ್ವಯ ಪರಿಶೀಲಿಸಿದ್ದು, ಆಯ್ಕೆ ಪಟ್ಟಿಯನ್ನು ಅಧಿಕೃತವಾಗಿ ಹೊರಡಿಸಲು ಸರ್ಕಾರಿ ಆದೇಶದ ಅಗತ್ಯವಿದೆ. ಅನುಬಂಧದಲ್ಲಿರುವ ಗದಗ ತಾಲ್ಲೂಕಿನ 7 ಗ್ರಾಮಗಳು, ನರಗುಂದ ತಾಲ್ಲೂಕಿನ 5 ಗ್ರಾಮಗಳು, ರೋಣ ತಾಲ್ಲೂಕಿನ 6 ಗ್ರಾಮಗಳು, ಶಿರಹಟ್ಟಿ ತಾಲ್ಲೂಕಿನ 4 ಗ್ರಾಮಗಳು ಮತ್ತು ಮುಂಡರಗಿ ತಾಲ್ಲೂಕಿನ 5 ಗ್ರಾಮಗಳು ಒಟ್ಟು 27 ಗ್ರಾಮಗಳಲ್ಲಿ ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತವನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:81:ಸುಗ್ರಾಯೋ:2012. ಬೆಂಗಳೂರು, ದಿನಾಂಕ:22.08.2012**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿ ಗದಗ ಜಿಲ್ಲೆಯ 5 ತಾಲ್ಲೂಕುಗಳ 27 ಗ್ರಾಮಗಳಿಗೆ ಅನುಬಂಧದಲ್ಲಿ ನಮೂದಿಸಿರುವಂತೆ ಸದರಿ ಗ್ರಾಮಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಸುವರ್ಣ ಗ್ರಾಮೋದಯ ಯೋಜನೆಯ 5ನೇ ಹಂತವನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1. ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ಹಾಗೂ ಉಲ್ಲೇಖ (2)ರ ಸುತ್ತೋಲೆಯಲ್ಲಿ ಹೊರಡಿಸಲಾದ ಯೋಜನಾ ಮಾರ್ಗಸೂಚಿ ಪ್ರತಿ ಗ್ರಾಮಕ್ಕೆ ಸಂಬಂಧಿಸಿದಂತೆ ಸಮಗ್ರ ಅಭಿವೃದ್ಧಿ ಯೋಜನೆಯನ್ನು ರೂಪಿಸಿ ಅನುಮೋದನೆ ನೀಡಿ ಕಾರ್ಯಗತಗೊಳಿಸುವುದು.
2. ಸರ್ಕಾರಿ ಸುತ್ತೋಲೆಯೊಂದಿಗೆ ಲಗತ್ತಿಸಲಾದ ಅನುಬಂಧ-1ರಲ್ಲಿ ಸೂಚಿಸಿದ ತಾಲ್ಲೂಕುವಾರು ನಿಗದಿಪಡಿಸಿರುವ ಅನುದಾನದ ಮಿತಿಯೊಳಗೆ ಕಾರ್ಯಕ್ರಮವನ್ನು ಕೈಗೊಳ್ಳುವುದು.
3. ಗ್ರಾಮವಾರು ಅನುದಾನವನ್ನು ನಿಗದಿಪಡಿಸುವಾಗ ಗ್ರಾಮದ ಜನಸಂಖ್ಯೆಗನುಗುಣವಾಗಿ ತಲಾನುದಾನ ನಿಯಮಕ್ಕೆ ತಕ್ಕಂತೆ ನಿಗದಿಪಡಿಸಿಕೊಳ್ಳತಕ್ಕದ್ದು.
4. ಸುತ್ತೋಲೆಯೊಂದಿಗೆ ಲಗತ್ತಿಸಲಾದ ಅನುಬಂಧ-2ರ ವೇಳಾಪಟ್ಟಿಗನುಗುಣವಾಗಿ ಕಾರ್ಯಾನುಷ್ಠಾನ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

22/8/12

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು(ಸು.ಗ್ರಾ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ್,
2. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಗದಗ್,
3. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮಾನ್ಯ ಉಪ ಮುಖ್ಯ ಮಂತ್ರಿ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಮುಖ್ಯ ಲೆಕ್ಕಾಧಿಕಾರಿ ಮತ್ತು ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಗದಗ್
6. ಸಂಕಲನಕಾರರು, ರಾಜ್ಯಪತ್ರ, ಬೆಂಗಳೂರು.
7. ಮಹಾಲೇಖಪಾಲರು, ಬೆಂಗಳೂರು.
8. ಹೆಚ್ಚುವರಿ.

ಅನುಬಂಧ

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:81:ಸುಗ್ರಾಯೋ:2012, ದಿನಾಂಕ:22.08.2012

## ಜಿಲ್ಲೆ: ಗದಗ

| ಕ್ರ.ಸಂ. | ತಾಲ್ಲೂಕು | ಗ್ರಾಮಗಳ ಹೆಸರು | 2001ರ ಜನಗಣತಿ ಪ್ರಕಾರ ಜನಸಂಖ್ಯೆ | ನಿಗದಿಪಡಿಸ ಬೇಕಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | ಗದಗ | ಹೊಂಬಳ | 7860 | 181.10 |
| | | ಬೆಳದಡಿ | 1657 | 38.18 |
| | | ಕಬಲಾಯತನಪಟ್ಟಿ | 523 | 12.05 |
| | | ನಾಗಾವಿ | 2969 | 68.40 |
| | | ಕಲ್ಲೂರು | 1866 | 43.00 |
| | | ಶಿರುಂಜ | 1945 | 44.82 |
| | | ತಿಮ್ಮಾಪೂರ | 2971 | 68.45 |
| | | **ಒಟ್ಟು** | **19791** | **456.00** |
| 2 | ನರಗುಂದ | ಬೈರನಹಟ್ಟಿ | 2069 | 49.29 |
| | | ವಾಸನ | 1506 | 35.88 |
| | | ಹುಣಸಿಕಟ್ಟಿ | 2285 | 54.43 |
| | | ಬೆಳ್ಳೇರಿ | 794 | 18.92 |
| | | ಲಕಮಾಪೂರ | 566 | 13.48 |
| | | **ಒಟ್ಟು** | **7220** | **172.00** |
| 3 | ರೋಣ | ಮಲ್ಲಾಪೂರ | 3813 | 91.50 |
| | | ಕರಮುಡಿ | 1629 | 39.10 |
| | | ಅಸೂಟಿ | 2980 | 71.51 |
| | | ಅಬ್ಬೀಗೇರಿ | 8183 | 196.38 |
| | | ಹಾಳಕೇರಿ | 3816 | 91.58 |
| | | ರಾಮಪೂರ | 1205 | 28.93 |
| | | **ಒಟ್ಟು** | **21626** | **519.00** |
| 4 | ಶಿರಹಟ್ಟಿ | ಬೆಳ್ಳಟ್ಟಿ | 6558 | 163.00 |
| | | ಬಾಲೇಹೊಸೂರು | 5347 | 132.00 |
| | | ಅಡರಕಟ್ಟೆ | 2203 | 54.74 |
| | | ವಡವಿ | 1302 | 32.36 |
| | | **ಒಟ್ಟು** | **15410** | **383.00** |
| 5 | ಮುಂಡರಗಿ | ಬಿಡನಾಳ | 1638 | 41.33 |
| | | ನಾಗರಳ್ಳಿ | 925 | 23.34 |
| | | ಮುಕ್ತುಂಪೂರ | 689 | 17.38 |
| | | ಬೆಣ್ಣಿಹಳ್ಳಿ | 1120 | 28.25 |
| | | ಹಿರೇವಡ್ಡಟ್ಟಿ | 6529 | 164.70 |
| | | **ಒಟ್ಟು** | **10901** | **275.00** |
| | | **ಜಿಲ್ಲೆಯ ಒಟ್ಟು ಮೊತ್ತ** | **74948** | **1805.00** |

22/8/12

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು(ಸು.ಗ್ರಾ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ